78

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ–72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

---

**ವಿಷಯ: ಇತ್ತೀಚಿನ ದಿನಗಳಲ್ಲಿ ದಕ್ಷಿಣ ಕನ್ನಡ ಉಡುಪಿ ಜಿಲ್ಲೆಗಳಲ್ಲಿ ಡ್ರಗ್ ಮಾಫಿಯಾ ಹಾವಳಿ ಹೆಚ್ಚಾಗಿದ್ದು, ಅತ್ಯಾಚಾರ ಪ್ರಕರಣದಲ್ಲಿ ಡ್ರಗ್ ಮಾಫಿಯಾದ ಪಾತ್ರ ಸ್ಪಷ್ಟವಾಗಿ ಗೋಚರಿಸುತ್ತಿದೆ. ಕರಾವಳಿ ಭಾಗದಲ್ಲಿ ಮಾದಕ ವ್ಯಸನದಿಂದಾಗಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿದೆ. ಮುಖ್ಯವಾಗಿ ವಿದ್ಯಾರ್ಥಿಗಳು ಮತ್ತು ಯುವಕರು ಮಾದಕ ವ್ಯಸನಗಳಿಗೆ ಬಲಿಯಾಗುತ್ತಿದ್ದಾರೆ. ಮಾದಕ ವ್ಯಸನ ಸಹಿತ ಎಲ್ಲಾ ಕಾನೂನು ಬಾಹಿರ ಚಟುವಟಿಕೆಗಳನ್ನು ಹಾಗೂ ಅಪರಾಧ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಯಲು ಈಗಿರುವ ಕಾನೂನಿಗೆ ಮಹತ್ವದ ತಿದ್ದುಪಡಿಗಳನ್ನು ತಂದು ಅಪರಾಧಿಗಳಿಗೆ ಕಠಿಣ ಶಿಕ್ಷೆ ನೀಡುವ ವಿಷಯದ ಕುರಿತು ಮಾನ್ಯ ಗೃಹ ಇಲಾಖೆ ಮಂತ್ರಿಗಳ ಗಮನ ಸೆಳೆಯುತ್ತೇನೆ.**

**ಉತ್ತರ:**

ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಡ್ರಗ್ಸ್ ಮಾಫಿಯಾ ಹಾವಳಿ ಹೆಚ್ಚಾಗಿರುವ ಬಗ್ಗೆ, ಅತ್ಯಾಚಾರ ಪ್ರಕರಣಗಳಲ್ಲಿ ಡ್ರಗ್ಸ್ ಮಾಫಿಯಾದ ಪಾತ್ರ ಹಾಗೂ ಮಾದಕ ವ್ಯಸನದಿಂದ ಕಾನೂನು ಸುವ್ಯವಸ್ಥೆ ಹದಗೆಡುತ್ತಿರುವುದು ಕಂಡು ಬಂದಿರುವುದಿಲ್ಲ. ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳು ಮತ್ತು ಯುವಕರಲ್ಲಿ ಮಾದಕ ದ್ರವ್ಯ ವ್ಯಸನದಿಂದ ಸಮಾಜದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ಕಾನೂನಿನ ಬಗ್ಗೆ ಅರಿವನ್ನು ಮೂಡಿಸುವ ಮೂಲಕ ಮಾದಕ ವ್ಯಸನಗಳಿಗೆ ಬಲಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಗುಪ್ತ ಮಾಹಿತಿಯನ್ನು ಕಲೆ ಹಾಕಿ ಮಾದಕ ವಸ್ತುಗಳನ್ನು ಮಾರಾಟ/ ಸಾಗಾಟ/ ಸೇವನೆ ಮಾಡುವುದನ್ನು ಪತ್ತೆಹಚ್ಚಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ. ಮಾದಕ ವ್ಯಸನ ಸಹಿತ ಎಲ್ಲಾ ಕಾನೂನು ಬಾಹಿರ ಚಟುವಟಿಕೆಗಳನ್ನು ಹಾಗೂ ಅಪರಾಧ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಯಲು ಪ್ರಸ್ತುತ ಚಾಲ್ತಿಯಲ್ಲಿರುವ ಕಾನೂನುಗಳನ್ನು ಕಟ್ಟುನಿಟ್ಟಿನಲ್ಲಿ ಅನುಷ್ಠಾನಗೊಳಿಸುವ ಮೂಲಕ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ಒಇ 12 ಪಿಎನ್‌ಡಿ 2025(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು